**CW : 1**

PW : 1

**CC No.1027/2025**

ದಿನಾಂಕಃ**19.02.2026** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರಿದ ಮುಖ್ಯವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಮಹಜರು ಕಾಲದಲ್ಲಿ ವಶಪಡಿಸಿಕೊಳ್ಳಲಾದ 9 ಹಗ್ಗಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು ಸದರಿ ಹಗ್ಗಗಳನ್ನು ಮು ಮಾ-1 ಎಂದು ಗುರುತಿಸಲಾಯಿತು. ನಾವು ಸೀಜ್ ಮಾಡಿದ ಮೊಬೈಲನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದ ಸಮಕ್ಷಮ ಹಾಜರುಪಡಿಸಲಾದ ಮೊಬೈಲನ್ನು ನೋಡಿ ಗುರುತಿಸಿದ್ದು ಅದನ್ನು ಮು.ಮಾ-2 ಎಂದು ಗುರುತಿಸಲಾಯಿತು. ಪಿಕಪ್ ವಾಹನದಿಂದ ಸೀಜ್ ಮಾಡಲಾದ 1 ನೇ ಆರೋಪಿಗೆ ಸೇರಿದ ವಾಹನದ ದಾಖಲಾತಿಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಆರ್ ಸಿ ನಕಲು ಪ್ರತಿ, ನೋಟರೀಕರಿಸಿದ ಡಿ ಎಲ್, ಇನ್ಸುರೆನ್ಸ್ ಕಾಪಿ, ಎಮಿಷನ್ ಟೆಸ್ಟ್ ಸರ್ಟಿಫಿಕೇಟ್ ಗಳನ್ನು ಗುರುತಿಸಿದ್ದು ಅವುಗಳನ್ನು ನಿಪಿ-2 ರಿಂದ 5 ಎಂದು ಗುರುತಿಸಲಾಯಿತು.

ಪಿಕಪ್ ವಾಹನದಲ್ಲಿ ಹಿಂಸಾತ್ಮಕ ರೀತಿಯಲ್ಲಿ ಕಟ್ಟಿಹಾಕಿದ್ದ ಜಾನುವಾರುಗಳ ಫೋಟೋವನ್ನು ಹಾಗೂ ಪಿಕಪ್ ವಾಹನದಿಂದ ಕೆಳಗೆ ಇಳಿಸಿದ ನಂತರ ತೆಗೆದ ಭಾವಚಿತ್ರವನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಭಾವಚಿತ್ರದ ಪ್ರತಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು. ನಾವು ನೋಡಿದಾಗ ಪಿಕಪ್ ವಾಹನದಲ್ಲಿ ಸತ್ತಿದ್ದ ಜಾನುವಾರುವನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಸದರಿ ಜಾನುವಾರುಗಳ ಭಾವಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಸಾಕ್ಷಿಯ ಮುಂದುವರಿದ ಮುಖ್ಯವಿಚಾರಣೆಗಾಗಿ ಸಮಯಾವಕಾಶ ಕೋರಿದ್ದು ನೀಡಲಾಗಿದೆ.

ನನ್ನ ಉಕ್ತಲೇಖನದ ರೀತ್ಯ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ.ಇದೆ.

1 ನೇ ಹೆಚ್ಚುವರಿ ಹಿರಿಯ ವ್ಯವಹಾರಿಕ ನ್ಯಾಯಾಧೀಶರು,

**CW : 1**

PW : 1

ಮತ್ತು ಜೆಎಂಎಫ್‌ಸಿ, ಪುತ್ತೂರು, ದ.ಕ.